**Akashvani: Bangalore**
**Regional Bulletin In Kannada**
**05.12.2025 : 14.30hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

******

**ಮುಖ್ಯಾಂಶಗಳು:**

1. ಕೇಂದ್ರದ ಉಮಿದ್ ಪೋರ್ಟಲ್‌ನಲ್ಲಿ ೫೦ ಸಾವಿರ ವಕ್ಫ್ ಆಸ್ತಿ ನೋಂದಾಯಿಸಿದ ಕರ್ನಾಟಕ
2. ರಾಜ್ಯಸಭೆಯಲ್ಲಿ ರಾಜ್ಯದ ಕಬ್ಬು ಬೆಳೆಗಾರರ ಸಮಸ್ಯೆ ಪ್ರಸ್ತಾಪಿಸಿದ ಸಂಸದ ಈರಣ್ಣ ಕಡಾಡಿ
3. ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ನೂತನ ಕಟ್ಟಡ ಲೋಕಾರ್ಪಣೆಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
4. ಚಿನ್ನ, ಬೆಳ್ಳಿ ಆಭರಣಗಳ ಗುಣಮಟ್ಟ ಕಾಪಾಡಲು ಹಾಲ್‌ಮಾರ್ಕ್ ಮತ್ತು HUID ಕಡ್ಡಾಯ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

**********

ಉಮಿದ್ ಪೋರ್ಟ್‌ಲ್‌ನಲ್ಲಿ ಇದುವರೆಗೆ ಒಂದು ಲಕ್ಷದ ೫೧ ಸಾವಿರಕ್ಕೂ ಹೆಚ್ಚು ವಕ್ಫ್ ಆಸ್ತಿಗಳನ್ನು ನೋಂದಾಯಿಸಲಾಗಿದೆ ಎಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕವು ಇದುವರೆಗೆ ಸುಮಾರು ೫೦ ಸಾವಿರ ಆಸ್ತಿಗಳನ್ನು ನೋಂದಾಯಿಸುವ ಮೂಲಕ ಉತ್ತಮವಾಗಿ ಕಾರ್ಯ ನಿರ್ವಹಿಸಿದೆ ಎಂದು ತಿಳಿಸಿದ್ದಾರೆ. ಮುಂದಿನ ಮೂರು ತಿಂಗಳ ಕಾಲ ಉಮಿದ್ ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಂಡರೆ ಯಾವುದೇ ದಂಡ ವಿಧಿಸಲಾಗುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

**********

ರಾಜ್ಯದ ಕಬ್ಬು ಬೆಳೆಗಾರರ ಸಹಾಯಕ್ಕೆ ಕೇಂದ್ರ ಸರ್ಕಾರ ಮುಂದಾಗಬೇಕು ಎಂದು ರಾಜ್ಯಸಭೆಯಲ್ಲಿಂದು ಈರಣ್ಣ ಕಡಾಡಿ, ಸಭಾಪತಿ ಸಿ.ಪಿ. ರಾಧಾಕೃಷ್ಣನ್ ಅವರಿಗೆ ಮನವಿ ಮಾಡಿದ್ದಾರೆ. ಕನ್ನಡದಲ್ಲಿಯೇ ಮಾತನಾಡಿದ ಅವರು, ಕರ್ನಾಟಕದ ಕಬ್ಬು ಬೆಳೆಯುವ ರೈತರು ಮತ್ತು ಕರ್ನಾಟಕದ ಸಕ್ಕರೆ ಉದ್ಯಮಕ್ಕೆ ಕೇಂದ್ರ ಸರ್ಕಾರ ಗಮನಹರಿಸುವಂತೆ ಕೋರಿದರು. ಕರ್ನಾಟಕದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕಬ್ಬು ಬೆಳೆಗಾರರಿದ್ದಾರೆ. ರಾಜ್ಯದಲ್ಲಿ ೮೧ ಸಕ್ಕರೆ

ಕಾರ್ಖಾನೆಗಳಿದ್ದು, ಸಕ್ಕರೆ ಉತ್ಪಾದನೆಯಲ್ಲಿ ಕರ್ನಾಟಕ ಮೂರನೇ ಸ್ಥಾನದಲ್ಲಿದೆ. ದೇಶದ ಒಟ್ಟು ಸಕ್ಕರೆ ಉತ್ಪಾದನೆಯಲ್ಲಿ ರಾಜ್ಯದ ಕೊಡುಗೆ ಶೇಕಡಾ ೧೭ ರಷ್ಟು ಇದೆ ಎಂದು ಅವರು ಗಮನ ಸೆಳೆದರು. ಕೇಂದ್ರ ಸರ್ಕಾರ ರೈತರ ಕಲ್ಯಾಣಕ್ಕೆ ಬದ್ಧವಾಗಿದ್ದು, ಈಗಾಗಲೇ ೨೩ ಬೆಳೆಗಳಿಗೆ ಕೇಂದ್ರ ಸರ್ಕಾರ ಬೆಂಬಲ ಬೆಲೆ ನಿಗದಿ ಮಾಡಿದೆ. ಕಬ್ಬಿನ ರಿಕವರಿ ದರವನ್ನು ಶೇಕಡ ೧೦.೨೫ ರಿಂದ ೯.೫ಕ್ಕೆ ಇಳಿಸುವಂತೆ ಮನವಿ ಮಾಡಿಕೊಂಡರು. ಜೊತೆಗೆ, ಕಬ್ಬು ಕಟಾವು ಮತ್ತು ಸಾರಿಗೆ ವೆಚ್ಚ ಸೇರಿಸಿ ಒಖP ದರ ನಿಗದಿ ಮಾಡುವಂತೆಯೂ ಅವರು ಕೋರಿದ್ದಾರೆ. ರಾಜ್ಯದಲ್ಲಿ ಬಹಳ ದೊಡ್ಡ ಪ್ರಮಾಣದಲ್ಲಿ ಬೆಲ್ಲದ ಉತ್ಪಾದನೆ ಕೂಡ ಆಗುತ್ತಿದೆ. ಪ್ರತಿ ಟನ್ ಕಬ್ಬಿಗೆ ೩ ಸಾವಿರದ ೫೫೦ ರೂಪಾಯಿಗಳನ್ನು ನಿಗದಿ ಮಾಡಲಾಗಿದ್ದು, ಸಕ್ಕರೆಗೆ ಕನಿಷ್ಠ ಬೆಂಬಲ ಬೆಲೆ ಹೆಚ್ಚಿಸಲು ಮನವಿ ಮಾಡಿದ್ದಾರೆ. ರಾಜ್ಯಸಭಾ ಸದಸ್ಯೆ ಸುಧಾಮೂರ್ತಿ ಮಾತನಾಡಿ, ಸಾಮಾಜಿಕ ಮಾಧ್ಯಮಗಳಲ್ಲಿ ಮಕ್ಕಳು ಅನುಚಿತವಾಗಿ ತೊಡಗಿಸಿಕೊಳ್ಳುತ್ತಿದ್ದು, ಇದಕ್ಕೆ ನಿರ್ಬಂಧ ಹೇರುವ ಅಗತ್ಯವಿದೆ ಎಂದು ಸದನದ ಗಮನಕ್ಕೆ ತಂದರು. ಸಾಮಾಜಿಕ ಜಾಲತಾಣಗಳನ್ನು ಮಕ್ಕಳು ದುರುಪಯೋಗಪಡಿಸಿಕೊಳ್ಳುವ ಕುರಿತು ಪೋಷಕರು ಎಚ್ಚರಿಕೆ ವಹಿಸಬೇಕು ಎಂದರು. ಮಕ್ಕಳ ಸಿನಿಮಾಗಳ ಮೇಲೆ ಕೇಂದ್ರ ಸರ್ಕಾರ ಈಗಾಗಲೇ ಕೆಲವು ನಿಯಮಗಳನ್ನು ರೂಪಿಸಿರುವಂತೆಯೇ ಸಾಮಾಜಿಕ ಮಾಧ್ಯಮಗಳ ಮೇಲೂ ಕ್ರಮ ತೆಗೆದುಕೊಳ್ಳುವ ಅಗತ್ಯವಿದೆ ಎಂದು ಪ್ರತಿಪಾದಿಸಿದರು.

**********

ಬೆಂಗಳೂರಿನ ಗಾಂಧಿನಗರದಲ್ಲಿ ನಿರ್ಮಿಸಲಾಗಿರುವ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ನೂತನ ಕಟ್ಟಡವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಉದ್ಘಾಟಿಸಿದರು.

ಗಾಂಧಿನಗರದ ಆಚಾರ್ಯ ತುಳಸಿ ಮಾರ್ಗದಲ್ಲಿ ೩೨ ಕೋಟಿ ರೂಪಾಯಿ ವೆಚ್ಚದಲ್ಲಿ ಈ ಬಹುಮಹಡಿ ಕಟ್ಟಡ ನಿರ್ಮಿಸಲಾಗಿದೆ. ಇದೇ ವೇಳೆ, ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರು ಕೆ.ಐ.ಎ.ಡಿ.ಬಿ.ಯ ೨ ಕೋಟಿ ರೂಪಾಯಿ ಲಾಭಾಂಶವನ್ನು ಮುಖ್ಯಮಂತ್ರಿ ಅವರ ಪರಿಹಾರ ನಿಧಿಗೆ ಹಸ್ತಾಂತರಿಸಿದರು. ಈ ಹಿಂದೆ ಕೈಗಾರಿಕಾ ಸಚಿವರಾಗಿದ್ದಾಗ ಈ ಕಟ್ಟಡ ನಿರ್ಮಾಣಕ್ಕೆ ಶ್ರಮಿಸಿದ ಶಾಸಕ ಆರ್.ವಿ.ದೇಶಪಾಂಡೆ ಅವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

**********

ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ - ನಿಮ್ಹಾನ್ಸ್‌ನ ೨೮ನೇ ಘಟಿಕೋತ್ಸವ ನಾಳೆ ನಡೆಯಲಿದೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ೨೫೧ ವಿದ್ಯಾರ್ಥಿಗಳು ವಿವಿಧ

ಪದವಿಗಳು ಮತ್ತು ಪ್ರಮಾಣ ಪತ್ರಗಳನ್ನು ಸ್ವೀಕರಿಸಲಿದ್ದಾರೆ. ೨೮ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಶ್ರೇಷ್ಠತಾ ಪ್ರಶಸ್ತಿಗಳನ್ನು ಪ್ರದಾನ ಮಾಡಲು ನಿರ್ಧರಿಸಲಾಗಿದೆ.

**********

ಕೇಂದ್ರ ಸರ್ಕಾರ ಚಿನ್ನ, ಬೆಳ್ಳಿ ಆಭರಣಗಳ ಗುಣಮಟ್ಟ ಕಾಪಾಡುವಲ್ಲಿ ಬ್ಯೂರೊ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್- BIS ಹಾಲ್ ಮಾರ್ಕ್ ಮತ್ತು ಹಾಲ್‌ಮಾರ್ಕ್ ಯೂನಿಕ್ ಐಡೆಂಟಿಫಿಕೇಶನ್- HUID ಅನ್ನು ಕಡ್ಡಾಯಗೊಳಿಸಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ದೆಹಲಿಯಲ್ಲಿಂದು ಮಾತನಾಡಿದ ಅವರು, ಬೆಳ್ಳಿಯ ಗುಣಮಟ್ಟದಲ್ಲಿ ಅತ್ಯುತ್ತಮ ಸುಧಾರಣೆ ತರುವ ನಿಟ್ಟಿನಲ್ಲಿ ಕೇಂದ್ರ ಗ್ರಾಹಕ ವ್ಯವಹಾರಗಳ ಇಲಾಖೆ ಈ ಕ್ರಮ ಕೈಗೊಂಡಿದೆ ಎಂದು ತಿಳಿಸಿದ್ದಾರೆ. ಪ್ರಸ್ತುತ ೧೭ ಲಕ್ಷ ೩೫ ಸಾವಿರಕ್ಕೂ ಹೆಚ್ಚು ಬೆಳ್ಳಿ ವಸ್ತುಗಳು HUID ಹಾಲ್‌ಮಾರ್ಕ್ ಆಗಿವೆ. ಬೆಳ್ಳಿಯ ಪರಿಶುದ್ಧತೆಯಿಂದ ಬೆಳ್ಳಿ ಖರೀದಿ ನಂತರವೂ ಪಾರದರ್ಶಕತೆ ಕಾಪಾಡಲು ಕ್ರಮ ಕೈಗೊಳ್ಳಲಾಗಿದ್ದು, ಇದರಿಂದ ಗ್ರಾಹಕರ ಹಿತರಕ್ಷಣೆಗೆ ಸರ್ಕಾರ ತನ್ನ ಬದ್ಧತೆಯನ್ನು ತೋರಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**********

ಹಾವೇರಿ ಜಿಲ್ಲಾಡಳಿತ ಪ್ರತಿ ಕ್ವಿಂಟಲ್‌ಗೆ ೨ ಸಾವಿರದ ೪೦೦ ರೂಪಾಯಿ ಬೆಂಬಲ ಬೆಲೆಯಲ್ಲಿ ಮೆಕ್ಕೆಜೋಳ ಖರೀದಿಸಲು ಏಳು ಕೇಂದ್ರಗಳನ್ನು ತೆರೆದಿರುವ ಬೆನ್ನಲ್ಲೇ, ಕರ್ನಾಟಕ ಹಾಲು ಮಹಾಮಂಡಳದಿಂದಲೂ ಪ್ರತ್ಯೇಕವಾಗಿ ಐದು ಕೇಂದ್ರಗಳನ್ನು ಆರಂಭಿಸಲಾಗಿದೆ. ಜಿಲ್ಲೆಯ ರೈತರು, ೧೨ ಕೇಂದ್ರಗಳಲ್ಲಿ ಮೆಕ್ಕೆಜೋಳ ಮಾರಾಟಕ್ಕೆ ನೋಂದಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಪಶು ಆಹಾರ ತಯಾರಿಕೆಗೆ ಮೆಕ್ಕೆಜೋಳ ಅಗತ್ಯವಾಗಿದ್ದು, ಧಾರವಾಡ ಹಾಗೂ ಶಿಕಾರಿಪುರದಲ್ಲಿ ಪಶು ಆಹಾರ ತಯಾರಿಕೆ ಘಟಕಗಳು ಕಾರ್ಯನಿರ್ವಹಿಸುತ್ತಿವೆ. ಈ ಎರಡೂ ಘಟಕಗಳಿಗೆ ೩೫ ಸಾವಿರ ಮೆಟ್ರಿಕ್ ಟನ್ ಮೆಕ್ಕೆಜೋಳ ಖರೀದಿಸಲು ಕೆಎಂಎಫ್ ತೀರ್ಮಾನಿಸಿದೆ. ಹಾವೇರಿ ಜಿಲ್ಲಾಡಳಿತ ಆರಂಭಿಸಿರುವ ಏಳು ಕೇಂದ್ರಗಳಲ್ಲಿ ಪ್ರತಿಯೊಬ್ಬ ರೈತರು, ತಮ್ಮ ೨೦ ಕ್ವಿಂಟಲ್ ಮೆಕ್ಕೆಜೋಳ ಮಾರುವುದಾಗಿ ನಮೂದಿಸಿದ್ದಾರೆ.

**********

ಮಳೆ ಹಾಗೂ ಬೆಳೆಹಾನಿಯ ಮರು ಸಮೀಕ್ಷೆ ಮಾಡಿ, ರೈತರಿಗೆ ಹೆಚ್ಚಿನ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ಬಿಜೆಪಿ ಜಿಲ್ಲಾ ಮುಖಂಡರು ಯಾದಗಿರಿ ನಗರದಲ್ಲಿ ಪ್ರತಿಭಟನೆ ನಡೆಸಿದರು. ಯಾದಗಿರಿ ನಗರದ ನೇತಾಜಿ ಸುಭಾಷ್ ಚಂದ್ರ ಬೋಸ್ ವೃತ್ತದಲ್ಲಿ ಬಿಜೆಪಿ ಕಾರ್ಯಕರ್ತರು ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿ, ಮಾನವ ಸರಪಳಿ ರಚಿಸಿ ವಾಹನಗಳ

ಸಂಚಾರ ತಡೆದರು. ಕೃಷ್ಣ ಮತ್ತು ಭೀಮಾ ಜಲಾನಯನ ಪ್ರದೇಶಗಳಲ್ಲಿ ನಿರಂತರ ಒಳ ಹರಿವು ಹೆಚ್ಚಳದಿಂದ ಕಲಬುರಗಿ, ಯಾದಗಿರಿ ಹಾಗೂ ಬೀದರ್ ಜಿಲ್ಲೆಗಳಲ್ಲಿ ತೊಗರಿ, ಹೆಸರು, ಹತ್ತಿ, ಮೆಕ್ಕೆಜೋಳ ಬೆಳೆಗಳಿಗೆ ಅತಿಹೆಚ್ಚು ಹಾನಿಯಾಗಿದೆ ಎಂದು ಪ್ರತಿಭಟನಾಕಾರರು ದೂರಿದ್ದಾರೆ. ಕಲ್ಯಾಣ ಕರ್ನಾಟಕದ ಎಲ್ಲ ಜಿಲ್ಲೆಗಳಲ್ಲಿ ಮೆಕ್ಕೆಜೋಳ ಖರೀದಿ ಕೇಂದ್ರ ಸ್ಥಾಪಿಸಬೇಕು. ರೈತರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಎಂದು ಆಗ್ರಹಿಸಿದ್ದಾರೆ.

**********

ತುಮಕೂರು ಜಿಲ್ಲೆಯಲ್ಲಿ ದಾಖಲೆ ರಹಿತ ಜನವಸತಿ ಪ್ರದೇಶಗಳಲ್ಲಿ ವಾಸಿಸುವ ಕುಟುಂಬಗಳಿಗೆ ಹಕ್ಕುಪತ್ರ ನೀಡುವ ನಿಟ್ಟಿನಲ್ಲಿ ಒಟ್ಟು ೫೪೦ ಕಂದಾಯ ಗ್ರಾಮಗಳು ಹಾಗೂ ಉಪ ಗ್ರಾಮಗಳನ್ನು ಗುರುತಿಸಲಾಗಿದೆ. ಸುಮಾರು ೧೮ ಸಾವಿರ ಕುಟುಂಬಗಳಿಗೆ ಹಕ್ಕುಪತ್ರ ವಿತರಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ. ತುರುವೇಕೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ತುಮಕೂರು ಜಿಲ್ಲೆಯಲ್ಲಿ ಗುಬ್ಬಿ ತಾಲ್ಲೂಕಿನ ನಂತರ ಅತಿ ಹೆಚ್ಚು ಕಂದಾಯ ಗ್ರಾಮಗಳನ್ನು ಗುರುತಿಸಿರುವ ತಾಲ್ಲೂಕು ತುರುವೇಕೆರೆಯಾಗಿದೆ. ಈ ತಾಲ್ಲೂಕಿನಲ್ಲಿ ಒಟ್ಟು ೫೦ ಕಂದಾಯ ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ ಎಂದು ಹೇಳಿದ್ದಾರೆ. ಕಂದಾಯ ಇಲಾಖೆಯು ೨೦-೩೦ ವರ್ಷಗಳ ಹಿಂದೆ ಮಂಜೂರಾಗಿರುವ ಸರ್ವೆ ನಂಬರ್‌ಗಳಿಗೆ ಹೊಸ ಸರ್ವೆ ನಂಬರ್ ಮಾಡುವ ಪ್ರಕ್ರಿಯೆಯನ್ನು ಕೈಗೆತ್ತಿಕೊಂಡಿದ್ದು, ಇದರ ಭಾಗವಾಗಿ ಈಗಾಗಲೇ ೧೦,೦೦೦ ಹೊಸ ಆರ್‌ಟಿಸಿಗಳನ್ನು ಸಿದ್ಧಪಡಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**********

ಅನ್ನಭಾಗ್ಯ ಯೋಜನೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ಮತ್ತು ಪಡಿತರ ವಿತರಣೆ ವ್ಯವಸ್ಥೆಯನ್ನು ಸರಳೀಕರಣಗೊಳಿಸುವ ಉದ್ದೇಶದಿಂದ ಹಾನಗಲ್‌ನಲ್ಲಿ ಹೊಸದಾಗಿ ೨೩ ಗ್ರಾಮಗಳಲ್ಲಿ ಪಡಿತರ ವಿತರಣಾ ಕೇಂದ್ರಗಳನ್ನು ಆರಂಭಿಸಲಾಗುತ್ತಿದೆ ಎಂದು ಶಾಸಕ ಶ್ರೀನಿವಾಸ ಮಾನೆ ತಿಳಿಸಿದ್ದಾರೆ. ತಾಲ್ಲೂಕಿನಲ್ಲಿ ೬೭ ಪಡಿತರ ವಿತರಣಾ ಕೇಂದ್ರಗಳಿದ್ದು, ಕೆಲವೆಡೆ ಫಲಾನುಭವಿಗಳು ಕೆಲಸ, ಕಾರ್ಯಗಳನ್ನು ಬಿಟ್ಟು ಪಡಿತರ ತರಲು ಅಕ್ಕಪಕ್ಕದ ಗ್ರಾಮಗಳಿಗೆ ತೆರಳುವ ಸ್ಥಿತಿ ನಿರ್ಮಾಣವಾಗಿತ್ತು. ಜನಸಾಮಾನ್ಯರಿಗೆ ಅನಾನುಕೂಲ ಆಗುತ್ತಿರುವುದನ್ನು ತಪ್ಪಿಸಲು ಹೊಸದಾಗಿ ಪಡಿತರ ವಿತರಣಾ ಕೇಂದ್ರ ಆರಂಭಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದ್ದಾರೆ.

**********

ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಇಂದು ಫೋನ್-ಇನ್ ಕಾರ್ಯಕ್ರಮ ನಡೆಸಿ, ನಾಗರಿಕರಿಂದ ಅಹವಾಲುಗಳನ್ನು ಆಲಿಸಲಾಯಿತು. ಇಂದಿನ ಕಾರ್ಯಕ್ರಮದಲ್ಲಿ ರಸ್ತೆ ಸಮಸ್ಯೆಗಳ ಕುರಿತು ೧೮ ಅಹವಾಲುಗಳು ಬಂದಿವೆ. ನಗರ ಪಾಲಿಕೆ ವ್ಯಾಪ್ತಿಯಲ್ಲಿ ದಿನ-ರಾತ್ರಿ ಗುಂಡಿ ಮುಚ್ಚುವ ಕಾರ್ಯ ಮುಂದುವರಿದಿದ್ದು, ಇದನ್ನು ಇನ್ನಷ್ಟು ವೇಗಗೊಳಿಸಿ, ಗುಣಮಟ್ಟ ಕಾಪಾಡಿಕೊಂಡು ರಸ್ತೆ ದುರಸ್ತಿ ಕಾರ್ಯಗಳನ್ನು ಪೂರ್ಣಗೊಳಿಸುವಂತೆ ಹಾಗೂ ಸುಗಮ ಸಂಚಾರಕ್ಕಾಗಿ ರಸ್ತೆ ನಿರ್ವಹಣೆಗೆ ಹೆಚ್ಚಿನ ಆದ್ಯತೆ ನೀಡಲು ಕೂಡ ಸೂಚಿಸಲಾಯಿತು ಎಂದು ಉತ್ತರ ನಗರಪಾಲಿಕೆ ಪ್ರಕಟಣೆಯಲ್ಲಿ ತಿಳಿಸಿದೆ.

**********

ಮಂಡ್ಯ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ಇದೇ ಮೊದಲ ಬಾರಿಗೆ ಇಂದಿನಿಂದ ೭ರವರೆಗೆ ೩ ದಿನಗಳ ಕೃಷಿ ಮೇಳ ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಈ ಬಾರಿಯ ಕೃಷಿಮೇಳವನ್ನು ವೈಶಿಷ್ಟ್ಯಪೂರ್ಣ ಹಾಗೂ ವಿಭಿನ್ನವಾಗಿ ಆಯೋಜಿಸಲಾಗುತ್ತಿದ್ದು, ರೈತರಿಗೆ ವ್ಯವಸಾಯ, ಬೆಳೆಗಳ ಸಮಗ್ರ ಮಾಹಿತಿ ದೊರೆಯಲಿದೆ.

**********